ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ:ಸಿ1(4)ಸ.ಪ್ರೌ.ಶಾ.ಮು.ಶಿ.ವ:101/2009-10 ದಿನಾಂಕ: 02-07-2010

## ಅಧಿಕೃತ ಜ್ಞಾಪನ

ವಿಷಯ: ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ರಡಿಯಲ್ಲಿ ರೂಪಿಸಲಾಗಿರುವ ನಿಯಮಗಳಂತೆ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು ಹಾಗು ತತ್ಸಮಾನ ಗ್ರೂಪ್ ಬಿ ವೃಂದದ ಅಧಿಕಾರಿಗಳ 2010-11ನೇ ಸಾಲಿನ ಅಂತರ್ ಘಟಕ ವರ್ಗಾವಣೆ ಬಗ್ಗೆ.

ಉಲ್ಲೇಖ: 1.ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 1 ಶಾಸನ 2007 ದಿ:01.09.2007
2.ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿ:15.10.2007
3.ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 173 ಇಟಿಆರ್ 2007 ದಿ:14.11.2007
4.ಸರ್ಕಾರದ ಪತ್ರಸಂ:ಇಡಿ.37.ಇಟಿಆರ್.2009 (ಪಿ) ದಿನಾಂಕ: 11.03.2010 ಹಾಗೂ 17.05.2010
5.ಈ ಕಛೇರಿಯ ಅಧಿಸೂಚನೆ ಸಮಸಂಖ್ಯೆ ದಿನಾಂಕ: 05.04.2010 ಮತ್ತು 20.05.2010
6.ದಿನಾಂಕ23.06.2010ರಂದು ನಡೆದ ಕೌನ್ಸಿಲಿಂಗ್

-&&&-

ಪ್ರಸ್ತಾವನೆ:-

ಉಲ್ಲೇಖ-1ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2007 ಜಾರಿಗೆ ಬಂದಿರುತ್ತದೆ. ಅದರ ಅನ್ವಯ ಉಲ್ಲೇಖ-2ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು, 2007ನ್ನು ರೂಪಿಸಲಾಗಿದ್ದು, ಉಲ್ಲೇಖ-3ರಲ್ಲಿ ಎ, ಬಿ, ಸಿ, ವಲಯದ ವರ್ಗೀಕರಣದ ಪ್ರದೇಶ ಹಾಗೂ ವ್ಯಾಪ್ತಿಯನ್ನು ಅಧಿಸೂಚಿಸಲಾಗಿದೆ.

ಉಲ್ಲೇಖ-1 2 ಮತ್ತು 3 ರ ಸೂಚನೆ ಮತ್ತು ಷರತ್ತಿಗೊಳಪಟ್ಟು, ಸಾಮಾನ್ಯ ವರ್ಗಾವಣೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮುಖೇನ 2010ನೇ ಸಾಲಿಗೆ ಜೂನ್ 30ರೊಳಗೆ ಪೂರ್ಣಗೊಳಿಸಲು ಉಲ್ಲೇಖ-4ರ ಸರ್ಕಾರದ ಪತ್ರದಲ್ಲಿ ಆದೇಶಿಸಲಾಗಿದೆ.

ಉಲ್ಲೇಖಿತ ಆದೇಶಗಳಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್.ಬಿ ವೃಂದದ ಅಧಿಕಾರಿಗಳ 2010-11ನೇ ಸಾಲಿನ ಅಂತರ್ ಘಟಕ ವರ್ಗಾವಣೆಗೆ ವೇಳಾ ಪಟ್ಟಿಯನ್ನು ಉಲ್ಲೇಖ-5ರ ಈ ಕಛೇರಿಯ ಸುತ್ತೋಲೆಯಲ್ಲಿ ಹೊರಡಿಸಲಾಗಿದೆ. ಅದರಂತೆ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಅಧಿಕಾರಿಗಳ ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ದಿನಾಂಕ:28.05.2010 ರಂದು ಪ್ರಕಟಿಸಲಾಗಿತ್ತು. ತಾತ್ಕಾಲಿಕ ಆದ್ಯತಾ ಪಟ್ಟಿಗೆ ಬಂದಿರುವ ಆಕ್ಷೇಪಣೆಗಳನ್ನು ಸರಿಪಡಿಸಿ ಅಂತಿಮ ಆದ್ಯತಾ ಪಟ್ಟಿಯನ್ನು ದಿನಾಂಕ: 16.06.2010ರಂದು ಪ್ರಕಟಿಸಲಾಗಿದೆ.

ಮೇಲೆ ವಿವರಿಸಿರುವಂತೆ ಅಂತಿಮ ಆದ್ಯತಾ ಪಟ್ಟಿಯಲ್ಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ಅಂತರ್ ಘಟಕ ವರ್ಗಾವಣೆಯನ್ನು ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆ ಮೂಲಕ ಮಾಡಬೇಕಾಗಿದ್ದು, ಅಂತಿಮ ಆದ್ಯತಾ ಪಟ್ಟಿಯಲ್ಲಿನ ಮುಖ್ಯ ಶಿಕ್ಷಕರುಗಳಿಗೆ ಉಲ್ಲೇಖ-6ರಂತೆ ದಿನಾಂಕ:23.06.2010 ರಂದು ಸ್ಥಳ ಆಯ್ಕೆ ನಡೆಸಲಾಗಿದ್ದು, ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಭಾಗವಹಿಸಿ, ವರ್ಗಾವಣೆ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ಸ್ಥಳನಿಯುಕ್ತಿಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಆದೇಶ:-

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೆಳಕಂಡ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳನ್ನು ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರ. ಸಂ | ಅಧಿಕಾರಿಗಳ ಹೆಸರು, ಹುದ್ದೆ, ಮತ್ತು ವಿಳಾಸ | ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ಥಳ ಆಯ್ಕೆ ಮಾಡಿಕೊಂಡಂತೆ ವರ್ಗಾವಣೆ ಮಾಡಿರುವ ಹುದ್ದೆ ಮತ್ತು ಸ್ಥಳ |
|---|---|---|
| 1 | 2 | 3 |
| 1. | ಸಿದ್ದಪ್ಪ ಟಿ<br>ಮುಖ್ಯ ಶಿಕ್ಷಕರು, ಸರ್ಕಾರಿ ಉರ್ದು ಪ್ರೌಢಶಾಲೆ, ಕರಡಗಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ | ಉಪಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಹರಪನಹಳ್ಳಿ, ದಾವಣಗೆರೆ ಜಿಲ್ಲೆ |
| 2. | ಬಾಲಚಂದ್ರ ಎ<br>ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಜಿದ್ದಿ, ಸಿದ್ದಾಪುರ ತಾಲ್ಲೂಕು, ಸಿರ್ಸಿ ಉತ್ತರ ಕನ್ನಡ ಜಿಲ್ಲೆ | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ತ್ಯಾಗರ್ತಿ, ಸಾಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ |
| 3. | ದೇವೇಂದ್ರಪ್ಪ ಟಿ<br>ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಬೋಚನಹಳ್ಳಿ, ಕೊಪ್ಪಳ ತಾಲ್ಲೂಕು, ಕೊಪ್ಪಳ ಜಿಲ್ಲೆ | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಕಣಿವೆಬಿಳಚಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ |
| 4. | ಕಲ್ಲೇನಿಂಗಪ್ಪ ಕೆ<br>ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಹಿರೇಹಡಲಗಿ, ಬಳ್ಳಾರಿ ಪೂರ್ವ, ಬಳ್ಳಾರಿ ಜಿಲ್ಲೆ | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಕುಂಚೂರು, ಹರಪನಹಳ್ಳಿ, ದಾವಣಗೆರೆ ಜಿಲ್ಲೆ |
| 5. | ಷಣ್ಮುಖಪ್ಪ ಕೆ<br>ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಹಿರೇಕೊಳಚಿ, ಹಡಗಲಿ ತಾಲ್ಲೂಕು, ಬಳ್ಳಾರಿ ಜಿಲ್ಲೆ | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಕಡಬಗೆರೆ ಹರಪನಹಳ್ಳಿ, ದಾವಣಗೆರೆ ಜಿಲ್ಲೆ |
| 6. | ಟಿ ಈಶ್ವರಪ್ಪ<br>ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಅಗೋಲಿ ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಗುರು ಸಿದ್ದಾಪುರ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ |
| 7. | ನಯೀಮ್ ಉರ್ ರೆಹಮಾನ್ ಕೆ ಎಸ್<br>ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಬಂಡಿಹಟ್ಟಿ ಬಳ್ಳಾರಿ [ಪಶ್ಚಿಮ] ವಲಯ, ಬಳ್ಳಾರಿ ಜಿಲ್ಲೆ | ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಕಛೇರಿ, ಮೊಳಕಾಲ್ಮೂರು, ಚಿತ್ರದುರ್ಗ ಜಿಲ್ಲೆ |

ಷರತ್ತುಗಳು:-

1) ಕೋರಿಕೆ ವರ್ಗಾವಣೆಯಾಗಿರುವುದರಿಂದ ವರ್ಗಾವಣೆಗೊಂಡ ಅಧಿಕಾರಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
2) ಅಧಿಕಾರಿಗಳ ಕೋರಿಕೆ ಮೇರೆಗೆ ವರ್ಗಾವಣೆಗೆ ಅವಕಾಶ ನೀಡಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲಾಗಿದ್ದು, ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.

3) ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದುವ ಪೂರ್ವದಲ್ಲಿ ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು/ಉಪನಿದೇಶಕರು (ಆಡಳಿತ) ರವರ ಅನುಮತಿ ಪಡೆದು ಬಿಡುಗಡೆ ಹೊಂದಲು ತಿಳಿಸಿದೆ.
4) ನಿಯಂತ್ರಣಾಧಿಕಾರಿಗಳು/ಉಪನಿರ್ದೇಶಕರು (ಆಡಳಿತ) (ಅಭಿವೃದ್ಧಿ) ರವರು ವರ್ಗಾವಣೆ ಹೊಂದಿರುವ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳನ್ನು ಬಿಡುಗಡೆ ಮಾಡುವಾಗ ಜನಗಣತಿ ಕಾರ್ಯದಲ್ಲಿ ಭಾಗವಹಿಸಿದ ಬಗ್ಗೆ ದೃಢೀಕರಿಸಿಕೊಳ್ಳುವುದು. ಜನಗಣತಿ ಕಾರ್ಯದಲ್ಲಿ ಭಾಗವಹಿಸಿದ ಪ್ರಕರಣಗಳನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳ ಪೂರ್ವಾನುಮತಿ ಪಡೆದು ಬಿಡುಗಡೆ ಆದೇಶ ನೀಡಲು ತಿಳಿಸಿದೆ.
5) ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.
6) ವರ್ಗಾವಣೆ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ ಅಂತಹ ಅಧಿಕಾರಿಯನ್ನೇ ಪೂರ್ಣ ಜವಾಬ್ದಾರರನ್ನಾಗಿ ಪರಿಗಣಿಸಿ, ತಪ್ಪು ಮಾಹಿತಿ ನೀಡಿದ ಕಾರಣಕ್ಕಾಗಿ ಅವರ ಮೇಲೆ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. (ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.)

(ಕೆ. ಕೃಷ್ಣೇಗೌಡ) 2/7/10
ಜಂಟಿ ನಿರ್ದೇಶಕರು (ಆಡಳಿತ)
ಆಯುಕ್ತರ ಪರವಾಗಿ
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು

02/07/2010

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗೆ,

1. ಸಂಬಂಧಿಸಿದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್–ಬಿ ವೃಂದದ ಅಧಿಕಾರಿಗಳಿಗೆ,

<u>ಪ್ರತಿಯನ್ನು</u>

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ.
4) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
6) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
7) ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪ್ರಾದೇಶಿಕ ಪರೀಕ್ಷಾ ಮಂಡಳಿ. ಮೈಸೂರು, ಬೆಳಗಾವಿ, ಗುಲ್ಬರ್ಗಾ
8) ರಾಜ್ಯದ ಎಲ್ಲಾ ಸಿ.ಟಿ.ಇ ಪ್ರಾಂಶುಪಾಲರುಗಳಿಗೆ.
9) ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರಿಗೆ (ಆಡಳಿತ)
10) ರಾಜ್ಯದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ
11) ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
12) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
13) ಸಂಬಂಧಿಸಿದ ಶಾಲೆಗಳ/ಕಾಲೇಜುಗಳ/ಕಛೇರಿ ಮುಖ್ಯಸ್ಥರಿಗೆ
14) ಕಛೇರಿ ಪ್ರತಿ